# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 18.06.2022ರಂದು ಪೂರ್ವಾಹ್ನ ಗಂಟೆ 10:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟ್ ಸಭಾಂಗಣದಲ್ಲಿ ನಡೆದ ಸಿಂಡಿಕೇಟಿನ 2022ನೇ ಸಾಲಿನ ಐದನೆಯ ವಿಶೇಷ ಸಭೆಯ ನಡವಳಿಗಳು.**

**ಉಪಸ್ಥಿತರು:**

| ಕ್ರ. ಸಂ. | | | ಸಹಿ |
|---|---|---|---|
| 1. | ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ಜೆನಿಫರ್ ಲೋಲಿಟಾ ಸಿ.,<br>ಜಂಟಿ ನಿರ್ದೇಶಕರು,<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಪ್ರೊ. ಕರುಣಾಕರ್ ಎ. ಕೋಟೆಗಾರ್ | ಸದಸ್ಯರು | |
| 4. | ಶ್ರೀ ರವಿಚಂದ್ರ ಪಿ.ಎಂ. | ಸದಸ್ಯರು | |
| 5. | ಡಾ. ಜೆರಾಲ್ಡ್ ಸಂತೋಷ್ ಡಿ'ಸೋಜ,<br>ಡೀನರು | ಸದಸ್ಯರು | |
| 6. | ಡಾ. ಶಂಕರ ಭಟ್ ಪಿ. | ಸದಸ್ಯರು | |
| 7. | ಶ್ರೀಮತಿ ಸುಭಾಶಿಣಿ ಶ್ರೀವತ್ಸ | ಸದಸ್ಯರು | |
| 8. | ಶ್ರೀ ಲೆವಿನ್ ಡಿ'ಸೋಜ | ಸದಸ್ಯರು | |
| 9. | ಶ್ರೀ ಕೆ. ರಮೇಶ | ಸದಸ್ಯರು | |
| 10. | ಶ್ರೀ ವಿವೇಕಾನಂದ ಪನಿಯಾಳ<br>(Online ಮೂಲಕ) | ಸದಸ್ಯರು | |
| 11. | ಶ್ರೀ ರವೀಂದ್ರನಾಥ ರೈ | ಸದಸ್ಯರು | |
| 12. | ಡಾ. ಎಂ. ಎಸ್. ತಳವಾರ | ಸದಸ್ಯರು | |
| 13. | ಶ್ರೀ ಮೋಹನ್ ಪಡಿವಾಳ್<br>(Online ಮೂಲಕ) | ಸದಸ್ಯರು | |
| 14. | ಡಾ. ಎ. ಪಾರ್ವತಿ ಅಪ್ಪಯ್ಯ | ಸದಸ್ಯರು | |
| 15. | ಪ್ರೊ. ವಿಶ್ವನಾಥ್. ಪ್ರಾಧ್ಯಾಪಕರು | ಸದಸ್ಯರು | |
| 16. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ<br>(ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 17. | ಪ್ರೊ. ಪಿ. ಎಲ್. ಧರ್ಮ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 18. | ಪ್ರೊ. ಕೆ. ಎಸ್. ಜಯಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 19. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

## I. ನಡವಳಿಗಳ ದೃಢೀಕರಣ

1. ದಿನಾಂಕ 11.06.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ನಾಲ್ಕನೆಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

   ದಿನಾಂಕ 11.06.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ನಾಲ್ಕನೆಯ ವಿಶೇಷ ಸಭೆಯ ನಡವಳಿಯನ್ನು ಈ ಕೆಳಗಿನ ತಿದ್ದುಪಡಿಗಳೊಂದಿಗೆ ದೃಢೀಕರಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಬ್ಬಂದಿ:ವಿಸ.4:07(2022) |
| **ವಿಷಯ:** | ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು ಮತ್ತು ದೂರಶಿಕ್ಷಣ ಕೇಂದ್ರ ಮಂಗಳೂರು ಇಲ್ಲಿನ ಆರ್ಥಿಕ ವಿಷಯಗಳಿಗೆ ಸಂಬಂಧಿಸಿದ ಲೋಪ ದೋಷಗಳ ಬಗ್ಗೆ ತನಿಖೆ ನಡೆಸಲು ಎ.ಸಿ.ಬಿ.ಗೆ ನೀಡುವ ದೂರು ಪತ್ರದ ಕರಡು ಅನುಮೋದನೆ ಕುರಿತು. |
| **ತಿದ್ದುಪಡಿ ನಿರ್ಣಯ:** | ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಪ್ರಸ್ತಾನೆಗೆ ಸಂಬಂಧಿಸಿ, ಈ ಹಿಂದೆ ಸಿಂಡಿಕೇಟು ಕೈಗೊಂಡಿರುವ ನಿರ್ಣಯಗಳಲ್ಲಿ ಹಲವಾರು ವ್ಯತ್ಯಯಗಳಿದ್ದು, ಸದರಿ ಪ್ರಕರಣಕ್ಕೆ ಸಂಬಂಧಿಸಿ, ಇಲಾಖಾ ವಿಚಾರಣೆ ನಡಸದೆ ಮುಂದಿನ ಕ್ರಮ ಕೈಗೊಳ್ಳುವುದು ಸಮಂಜಸವಲ್ಲದಿರುವ ವಿಚಾರವನ್ನು ಮಾನ್ಯ ಕುಲಪತಿಗಳು ಸಭೆಯ ಗಮನಕ್ಕೆ ತಂದರು.<br>ಅಂತಿಮವಾಗಿ, ಈ ಬಗ್ಗೆ ಇಲಾಖಾ ವಿಚಾರಣೆ ನಡೆಸಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.<br>ನಿಯಮಾನುಸಾರ ಇಲಾಖಾ ವಿಚಾರಣೆ ನಡೆಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು. |

## II. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಬ್ಬಂದಿ:ವಿಸ.5:01(2022) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ ಆರೋಗ್ಯ ಕೇಂದ್ರಕ್ಕೆ ವೈದ್ಯರೊಬ್ಬರ ಸೇವೆಯನ್ನು ಒಡಂಬಡಿಕೆ (MOU) ಮೂಲಕ ಪಡೆಯುವ ಬಗ್ಗೆ. |
| **ನಿರ್ಣಯ:** | ಕಾರ್ಯಸೂಚಿಯನ್ನು ಹಿಂಪಡೆಯಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಬ್ಬಂದಿ:ವಿಸ.5:02(2022) |
| **ವಿಷಯ:** | ಡಾ. ಅನಿತಾ ರವಿಶಂಕರ್, ಸಮಾಜಶಾಸ್ತ್ರದ ಸಹ ಪ್ರಾಧ್ಯಾಪಕರು, ಮಂಗಳೂರು ವಿಶ್ವವಿದ್ಯಾನಿಲಯ ಇವರ ಮೇಲಿನ ಮಂಗಳೂರು ಲೋಕಾಯುಕ್ತ ಪೊಲೀಸ್ ಠಾಣಾ ಮೊಕದ್ದಮೆ – ಅಪರಾಧ ನಿರ್ಣಯದ ಬಗ್ಗೆ. |

ನಿರ್ಣಯ: ಕಾನೂನು ತಜ್ಞರಿಂದ ಪಡೆದ ಅಭಿಪ್ರಾಯವನ್ನು ಸಿಂಡಿಕೇಟು ಪರಿಗಣಿಸದಿರಲು ಮತ್ತು ಪ್ರಸ್ತುತ ಪ್ರಕರಣವು ನ್ಯಾಯಾಲಯದಲ್ಲಿರುವುದರಿಂದ ಈ ಕುರಿತು ನ್ಯಾಯಾಲಯದ ಆದೇಶ ಸ್ವೀಕೃತವಾಗುವವರೆಗೆ ಯಥಾಸ್ಥಿತಿಯನ್ನು ಕಾಯ್ದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.5:03(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿ ಡಾ. ಬಿ. ಆರ್. ಅಂಬೇಡ್ಕರ್ ರವರ ಕಂಚಿನ ಪ್ರತಿಮೆಯನ್ನು ಸ್ಥಾಪಿಸಲು ಪ್ರತಿಮೆಯನ್ನು ಒದಗಿಸಿಕೊಡುವ ಕಾಮಗಾರಿಯ Expression of Interest (E.O.I.) ನ ಅಂದಾಜುಪಟ್ಟಿಗೆ ಘಟನೋತ್ತರ ಅನುಮೋದನೆ ಬಗ್ಗೆ.

**ನಿರ್ಣಯ:** ದಿನಾಂಕ 26.05.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.5:04(2022)

**ವಿಷಯ:** Construction of Ladies Toilets at FMKMC College Campus Madikeri, Kodagu Dist- ಟೆಂಡರು ಅನುಮೋದನೆ ಬಗ್ಗೆ.

**ನಿರ್ಣಯ:** ದಿನಾಂಕ 26.05.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.5:05(2022)

**ವಿಷಯ:** ಫೀ. ಮಾ. ಕೆ. ಎಂ. ಕಾರ್ಯಪ್ಪ ಕಾಲೇಜು ಮಡಿಕೇರಿ ಇಲ್ಲಿಯ ನಿವೇಶನಕ್ಕೆ ಆವರಣ ಗೋಡೆ ನಿರ್ಮಿಸುವ ಕಾಮಗಾರಿ– ಟೆಂಡರು ಅಂಗೀಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 26.05.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.5:06(2022)

**ವಿಷಯ:** Main Gate for Administrative Building at Mangalore University Campus – ಟೆಂಡರು ಅಂಗೀಕರಿಸುವ ಬಗ್ಗೆ.

**ನಿರ್ಣಯ:** ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.5:07(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಸಿ ಮಾದರಿ ವಸತಿಗೃಹ ಸಂಖ್ಯೆ 2, 3, 4, 26, 27ರ ನಿರ್ವಹಣಾ ಕಾಮಗಾರಿ – ಟೆಂಡರು ಅಂಗೀಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 26.05.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ವಿಸ.5:08(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿ ಡಾ. ಬಿ. ಆರ್. ಅಂಬೇಡ್ಕರ್‌ರವರ ಕಂಚಿನ ಪ್ರತಿಮೆಯನ್ನು ಸ್ಥಾಪಿಸಲು ಪ್ರತಿಮೆಯನ್ನು ಒದಗಿಸಿಕೊಡುವ ಕಾಮಗಾರಿಯ ಟೆಂಡರ್ ಅಂಗೀಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 26.05.2022 ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು ಕಾಮಗಾರಿಗೆ ಸಂಬಂಧಿಸಿ, ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ವಿಸ.5:09(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿರುವ ಶಿಕ್ಷಕರುಗಳಿಗೆ ಲ್ಯಾಪ್‌ಟಾಪ್ ಒದಗಿಸುವ ಬಗ್ಗೆ.

**ನಿರ್ಣಯ:** ಹಣಕಾಸಿನ ಲಭ್ಯತೆಗೆ ಅನುಗುಣವಾಗಿ ಲ್ಯಾಪ್‌ಟಾಪ್ ಒದಗಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿ, ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ವಿಸ.5:10(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಮತ್ತು Yenepoya Deemed to be University, ದೇರಳಕಟ್ಟೆ, ಮಂಗಳೂರು ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪ.ಜಾ.ಪ.ಪಂ. ಘಟಕ:ವಿಸ5:11(2022)

**ವಿಷಯ:** ಪರಿಶಿಷ್ಟ ಜಾತಿ / ಪಂಗಡದ ವಿದ್ಯಾರ್ಥಿಗಳಿಗೆ ವಿತರಿಸಬೇಕಾದ ಲ್ಯಾಪ್‌ಟಾಪ್‌ಗಳ ಖರೀದಿ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು. ಸದರಿ ಲ್ಯಾಪ್‌ಟಾಪ್‌ಗಳ ಖರೀದಿಗೆ ಸಂಬಂಧಿಸಿ ಅನುದಾನ ಬಿಡುಗಡೆ ಮಾಡಲು ಸಮಾಜ ಕಲ್ಯಾಣ ಇಲಾಖೆಗೆ ತುರ್ತಾಗಿ ಪತ್ರ ಬರೆಯಲು ಕುಲಸಚಿವರಿಗೆ ಸೂಚಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಬ್ಬಂದಿ:ವಿಸ.5:12(2022) |
| **ವಿಷಯ:** | ಡಾ. ಎಸ್. ತಿಪ್ಪೇಸ್ವಾಮಿ ಇವರು ಮಾನ್ಯ ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ಹೂಡಿರುವ ರಿಟ್ ಅರ್ಜಿ ಸಂಖ್ಯೆ 1318/2016 (ಪಿಐಎಲ್) ಜಿಎಂ(ಆರ್‌ಇಎಸ್) – ಸೇವಾ ದೃಢೀಕರಣ ನೀಡುವ ಬಗ್ಗೆ. |
| **ನಿರ್ಣಯ:** | ಪ್ರಕರಣಕ್ಕೆ ಸಂಬಂಧಿಸಿದ ಸಮಗ್ರ ದಾಖಲೆಗಳನ್ನು ಮತ್ತು ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿರುವ ರಿಟ್ ಅರ್ಜಿ ಸಂಖ್ಯೆ 1318/2016 (ಪಿಐಎಲ್) ಜಿಎಂ(ಆರ್‌ಇಎಸ್) ರ ಅರ್ಜಿಗಳು, ಲಿಖಿತ ಆಕ್ಷೇಪಗಳು ಮತ್ತು ಹಾಜರುಪಡಿಸಿದ ದಾಖಲೆಗಳನ್ನು ಸಹ ಸಭೆಯಲ್ಲಿ ವಿಸ್ತೃತವಾಗಿ ಪರಿಶೀಲಿಸಲಾಯಿತು. ಪ್ರಸ್ತಾಪಿತ ಪಿಐಎಲ್ ನಲ್ಲಿ ಪ್ರಸ್ತಾಪಿಸಿರುವ ಎಲ್ಲಾ ಪ್ರಾಧ್ಯಾಪಕರುಗಳ ಮೇಲೆ ಸುಳ್ಳು ಹಾಗೂ ಆಧಾರರಹಿತ ಆರೋಪ ಮಾಡಿ ಅರ್ಜಿ ಸಲ್ಲಿಸಿದ ಪ್ರೊ. ತಿಪ್ಪೇಸ್ವಾಮಿಯವರ ವಿರುದ್ಧ ನ್ಯಾಯಾಂಗ ನಿಂದನೆ ಮತ್ತು ಮಾನಹಾನಿ ಪ್ರಕರಣ ದಾಖಲಿಸಲು ಹಾಗೂ ಸೂಕ್ತ ಕಾನೂನು ಕ್ರಮಕ್ಕೈಗೊಳ್ಳಲು ಸಹ ಸಿಂಡಿಕೇಟು ನಿರ್ಣಯಿಸಿತು.<br>ಮುಂದುವರಿದು, ಅರ್ಜಿಯಲ್ಲಿ ನಮೂದಿಸಿರುವ ಶಿಕ್ಷಕರುಗಳಿಗೆ ವಿಶ್ವವಿದ್ಯಾನಿಲಯದಿಂದ ಸೇವಾ ದೃಢೀಕರಣ ಹಾಗೂ ಯಾವುದೇ ರೀತಿಯ ಗೌಪ್ಯತಾ ವರದಿ ಹಾಗೂ ಇನ್ನಿತರ ವರದಿಗಳನ್ನು ನೀಡುವುದಕ್ಕೆ ಈ ಪಿಐಎಲ್‌ನ್ನು ಪರಿಗಣಿಸಬಾರದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಬ್ಬಂದಿ:ವಿಸ.5:13(2022) |
| **ವಿಷಯ:** | ಡಾ. ಎಸ್. ತಿಪ್ಪೇಸ್ವಾಮಿ ಇವರು ಮಾನ್ಯ ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ಹೂಡಿರುವ ರಿಟ್ ಅರ್ಜಿ ಸಂಖ್ಯೆ 31446/2015 ಜಿಎಂ(ಆರ್‌ಇಎಸ್) – ಸೇವಾ ದೃಢೀಕರಣ ನೀಡುವ ಬಗ್ಗೆ. |
| **ನಿರ್ಣಯ:** | ಪ್ರಕರಣಕ್ಕೆ ಸಂಬಂಧಿಸಿದ ಸಮಗ್ರ ದಾಖಲೆಗಳನ್ನು ಮತ್ತು ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿರುವ ರಿಟ್ ಅರ್ಜಿ ಸಂಖ್ಯೆ 31446/2015 ಜಿಎಂ(ಆರ್‌ಇಎಸ್)ರ ಅರ್ಜಿಗಳು, ಲಿಖಿತ ಆಕ್ಷೇಪಗಳು ಮತ್ತು ಹಾಜರುಪಡಿಸಿದ ದಾಖಲೆಗಳನ್ನು ಸಹ ಸಭೆಯಲ್ಲಿ ವಿಸ್ತೃತವಾಗಿ ಪರಿಶೀಲಿಸಲಾಯಿತು. ಪ್ರಸ್ತಾಪಿತ ರಿಟ್ ಅರ್ಜಿಯಲ್ಲಿ ಪ್ರಸ್ತಾಪಿಸಿರುವ ಎಲ್ಲಾ ಪ್ರಾಧ್ಯಾಪಕರುಗಳ ಮೇಲೆ ಸುಳ್ಳು ಹಾಗೂ ಆಧಾರರಹಿತ ಆರೋಪ ಮಾಡಿ ಅರ್ಜಿ ಸಲ್ಲಿಸಿದ ಪ್ರೊ. ತಿಪ್ಪೇಸ್ವಾಮಿಯವರ ವಿರುದ್ಧ ನ್ಯಾಯಾಂಗ ನಿಂದನೆ ಮತ್ತು ಮಾನಹಾನಿ ಪ್ರಕರಣ ದಾಖಲಿಸಲು ಹಾಗೂ ಸೂಕ್ತ ಕಾನೂನು ಕ್ರಮಕ್ಕೈಗೊಳ್ಳಲು ಸಹ ಸಿಂಡಿಕೇಟು ನಿರ್ಣಯಿಸಿತು.<br>ಮುಂದುವರಿದು, ಅರ್ಜಿಯಲ್ಲಿ ನಮೂದಿಸಿರುವ ಶಿಕ್ಷಕರುಗಳಿಗೆ ವಿಶ್ವವಿದ್ಯಾನಿಲಯದಿಂದ ಸೇವಾ ದೃಢೀಕರಣ ಹಾಗೂ ಯಾವುದೇ ರೀತಿಯ ಗೌಪ್ಯತಾ ವರದಿ ಹಾಗೂ ಇನ್ನಿತರ ವರದಿಗಳನ್ನು ನೀಡುವುದಕ್ಕೆ ಈ ರಿಟ್ ಅರ್ಜಿಯನ್ನು ಪರಿಗಣಿಸಬಾರದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಂಡಿಕೇಟು:ವಿಸ.5:14(2022) |
| **ವಿಷಯ:** | ಪ್ರೊ. ಕರುಣಾಕರ್ ಎ. ಕೋಟೆಗಾರ್, ಸಿಂಡಿಕೇಟು ಸದಸ್ಯರು ಇವರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ. |
| **ವಿಷಯ 1** | Status of Public Interest Litigation filed by Dr. S. Thippeswamy against Mangalore University |
| **ನಿರ್ಣಯ:** | ಈ ಬಗ್ಗೆ ಕಾರ್ಯಸೂಚಿ ಸಂಖ್ಯೆ 12 ಮತ್ತು 13 ರಲ್ಲಿ ನಿರ್ಣಯ |

ಕೈಗೊಳ್ಳಲಾಗಿರುತ್ತದೆ.

**ವಿಷಯ 2** Professor promotion to faculty working in the Constituent College

**ನಿರ್ಣಯ:** ಪ್ರಸ್ತಾವನೆಗೆ ಸಂಬಂಧಿಸಿ, ಪೂರಕ ದಾಖಲೆಗಳೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ವಿಸ.5:15(2022)

**ವಿಷಯ:** ಡಾ. ಪಾರ್ವತಿ ಅಪ್ಪಯ್ಯ, ಸಿಂಡಿಕೇಟು ಸದಸ್ಯರು ಇವರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.

**ನಿರ್ಣಯ 1** ವಿಶ್ವವಿದ್ಯಾನಿಲಯದ ನಿಯಮಾನುಸಾರ ಸಂಯೋಜನೆ ಶುಲ್ಕಗಳನ್ನು ಕಾಲೇಜುಗಳಿಂದ ಸಂಗ್ರಹಿಸಲಾಗುವುದೆಂಬುದಾಗಿ ಸಭೆಗೆ ಸ್ಪಷ್ಟಪಡಿಸಲಾಯಿತು.

**ನಿರ್ಣಯ 2** ಪರೀಕ್ಷಾ ಮೌಲ್ಯಮಾಪನಕ್ಕೆ ಸಂಬಂಧಿಸಿ, ಮುಂದಿನ ಶೈಕ್ಷಣಿಕ ವರ್ಷದಿಂದ ಮೌಲ್ಯಮಾಪನ ಕೇಂದ್ರಗಳನ್ನು ವಿಕೇಂದ್ರೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೆಂಬುದಾಗಿ ಸಭೆಗೆ ತಿಳಿಸಲಾಯಿತು.

**ನಿರ್ಣಯ 3** ಸಿಂಡಿಕೇಟು ಸಭೆಗಳಲ್ಲಿ ಕೈಗೊಂಡ ನಿರ್ಣಯಗಳನ್ನು ಕಾಲಕಾಲಕ್ಕೆ ಅನುಷ್ಠಾನಗೊಳಿಸಲಾಗುವುದೆಂಬುದಾಗಿ ಸಭೆಗೆ ತಿಳಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿಸ.5:16(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿ ಭದ್ರತಾ ವ್ಯವಸ್ಥೆಗೆ ಸಂಬಂಧಿಸಿ ವ್ಯತ್ಯಾಸದ ಮೊತ್ತವನ್ನು ಭದ್ರತಾ ಸಿಬ್ಬಂದಿಗಳಿಗೆ ಪಾವತಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಕಾನೂನು ಘಟಕ:ವಿಸ.5:17(2022)

**ವಿಷಯ:** ಕರ್ನಾಟಕ ರಾಜ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಅಪೀಲು ಸಂಖ್ಯೆ 1081/2021 ರಲ್ಲಿ ವಾದ ಕಾಲೀನ ಅರ್ಜಿಗೆ ಸಂಬಂಧಿಸಿದಂತೆ ಹೊರಡಿಸಿರುವ ಆದೇಶ ದಿನಾಂಕ 05.04.2022 ರ ಕುರಿತು ನ್ಯಾಯವಾದಿ ಅರುಣ್ ಶ್ಯಾಮ್ ಅಸೋಸಿಯೇಟ್ಸ್ ಇವರು ನೀಡಿರುವ ಕಾನೂನು ಅಭಿಪ್ರಾಯದ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ವಿಸ್ತೃತವಾಗಿ ಚರ್ಚಿಸಲಾಯಿತು. ಪ್ರೊ. ಅರಬಿ ಯು., ಇವರ ಅಮಾನತ್ತನ್ನು ಹಿಂಪಡೆಯಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಮುಂದುವರಿದು, ಸದರಿಯವರನ್ನು ತಕ್ಷಣದಿಂದ ಅನ್ವಯವಾಗುವಂತೆ ಫೀಲ್ಡ್ ಮಾರ್ಷಲ್ ಕೆ. ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿನ ಸ್ನಾತಕೋತ್ತರ ಅರ್ಥಶಾಸ್ತ್ರ ಕಾರ್ಯಕ್ರಮಕ್ಕೆ ನಿಯೋಜಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಈ ಹಂತದಲ್ಲಿ ಸುಪ್ರೀಂ ಕೋರ್ಟ್‌ಗೆ ಅಪೀಲು ಹೋಗುವುದು ಸೂಕ್ತವಲ್ಲ, ಪ್ರಕರಣದ ನ್ಯಾಯವಾದಿಗಳಾಗಿರುವ ಅರುಣ್ ಶ್ಯಾಮ್ ಅಸೋಸಿಯೇಟ್ಸ್ ಇವರನ್ನು ಸಂಪರ್ಕಿಸಿ, ಉಚ್ಛ ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿರುವ ಪ್ರಕರಣವನ್ನು ಶೀಘ್ರದಲ್ಲಿ ಕೈಗೆತ್ತಿಕೊಳ್ಳುವಂತೆ ಮನವಿ ಮಾಡಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಕಾನೂನು ಘಟಕ:ವಿಸ.5:18(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಡಾ. ವಜೀದಾ ಬಾನೋ, ಡಾ. ದಯಾನಂದ ನಾಯ್ಕ್ ಮತ್ತು ಡಾ. ನಾಗಪ್ಪ ಗೌಡ ಆರ್. ಇವರನ್ನು ಅವರು ಮೂಲತಃ ನೇರ ನೇಮಕಗೊಂಡಿದ್ದ ಘಟಕ ಕಾಲೇಜುಗಳಿಗೆ ಮರು ವರ್ಗಾವಣೆಗೊಳಿಸಲು ದಿನಾಂಕ 27.08.2021ರ ಸಿಂಡಿಕೇಟು ಸಭೆಯಲ್ಲಿ ಕೈಗೊಂಡಿರುವ ನಿರ್ಣಯವನ್ನು ರದ್ದುಗೊಳಿಸುವಂತೆ ಸದರಿಯವರು ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಇತರರ ವಿರುದ್ಧ ಹೂಡಿರುವ ರಿಟ್ ಅರ್ಜಿ ಸಂಖ್ಯೆ: 17243/2021ಗೆ ಸಂಬಂಧಿಸಿದಂತೆ ಪ್ರಸಕ್ತ ಸ್ಥಿತಿಗತಿ.

**ನಿರ್ಣಯ:** ದಿನಾಂಕ 18.06.2022ರಂದು ಕುಲಸಚಿವರ ಕಛೇರಿಯಲ್ಲಿ ಅರುಣ್ ಶ್ಯಾಮ್ ಅಸೋಸಿಯೇಟ್ಸ್ ಇವರಿಂದ ಮಿಂಚಂಚೆ (e-mail) ಮೂಲಕ ಸ್ವೀಕರಿಸಲಾಗಿರುವ ಉಚ್ಚ ನ್ಯಾಯಾಲಯದ ಆದೇಶವನ್ನು ಕುಲಸಚಿವರು ಸಭೆಯ ಗಮನಕ್ಕೆ ತಂದರು. ಈ ಹಿನ್ನೆಲೆಯಲ್ಲಿ ನ್ಯಾಯಾಲಯದ ನಿರ್ದೇಶನಗಳುಸಾರ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ವಿಸ.5:19(2022)

**ವಿಷಯ:** ಮಾನ್ಯ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶಾನುಸಾರ ವಯೋನಿವೃತ್ತಿಯ ನಂತರ ಸೇವೆಯನ್ನು ಮುಂದುವರಿಸಿದ ಪ್ರಾಧ್ಯಾಪಕರಿಗೆ ಮುಂದುವರಿಸಿರುವ ಸೇವಾ ಅವಧಿಗೆ ವೇತನ ಪಾವತಿಸುವ ಬಗ್ಗೆ.

**ನಿರ್ಣಯ:** ಸಮರ್ಪಕ ಮತ್ತು ಸಮಗ್ರ ಮಾಹಿತಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿಸ.5:20(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2020–21ನೇ ಸಾಲಿನ ವಾರ್ಷಿಕ ವರದಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ವಿಸ.5:21(2022)

**ವಿಷಯ:** ಸಮವಸ್ತ್ರ ಕುರಿತು ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ನಡೆದ ಘಟನೆಯ ಬಗ್ಗೆ ಪ್ರಾಂಶುಪಾಲರು ಸಲ್ಲಿಸಿದ ವರದಿಯ ಕುರಿತು.

**ನಿರ್ಣಯ:** ಪ್ರಾಂಶುಪಾಲರ ವರದಿಯನ್ನು ಪರಿಶೀಲಿಸಲಾಯಿತು. ಈ ಬಗ್ಗೆ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳುವ ಅಧಿಕಾರವನ್ನು ಕಾಲೇಜಿನ ಪ್ರಾಂಶುಪಾಲರಿಗೆ ನೀಡಲಾಯಿತು. ಈ ರೀತಿಯ ಘಟನೆಗಳು ಮುಂದಿನ ದಿನಗಳಲ್ಲಿ ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕೆಂಬುದಾಗಿ ಪ್ರಾಂಶುಪಾಲರಿಗೆ ತಿಳಿಸಬೇಕೆಂಬುದಾಗಿಯೂ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ವಿಸ.5:22(2022)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿನ ಹೊಸ ಕಾಲೇಜುಗಳ ಸಂಯೋಜನೆ ಬಗ್ಗೆ.

**ನಿರ್ಣಯ:** ದಿನಾಂಕ 16.06.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು

ಅನುಮೋದಿಸಲಾಯಿತು.

ಮುಂದುವರಿದು, ಹೊಸ ಸಂಯೋಜನೆಗೆ ಸಂಬಂಧಿಸಿ, ಸರಕಾರದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ವಿಸ.5:23(2022)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಹೊಸತಾಗಿ ಶಾಶ್ವತ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ದಿನಾಂಕ 16.06.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ವಿಸ.5:24(2022)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿನ ಮುಂದುವರಿಕೆ ಕಾಲೇಜುಗಳ ಸಂಯೋಜನೆ ಬಗ್ಗೆ.

**ನಿರ್ಣಯ:** ದಿನಾಂಕ 16.06.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ವಿಸ.5:25(2022)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ವಿಸ್ತರಣಾ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ದಿನಾಂಕ 16.06.2022ರಂದು ನಡೆದ ಶೈಕ್ಷಣಿಕ ಮಂಡಳಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ವಿಸ.5:26(2022)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಶುಲ್ಕಗಳನ್ನು ನಿಗದಿಪಡಿಸುವ ಬಗ್ಗೆ.

**ನಿರ್ಣಯ:**

1. 3. Eligibility Certificate (i) ರಲ್ಲಿ ನಮೂದಿಸಿರುವ Gadinadu Kannada Students ನ ಶುಲ್ಕವನ್ನು ರೂ.300.00 ಎಂದು ತಿದ್ದುಪಡಿ ಮಾಡಲಾಯಿತು.
2. ವಿದೇಶೀ ವಿದ್ಯಾರ್ಥಿಗಳ ಶುಲ್ಕವನ್ನು ಶೇಕಡಾ 20 ಹೆಚ್ಚಿಸಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಇತರ ವಿಷಯಗಳು:**

1. ಕರ್ನಾಟಕ ಲೋಕಾಯುಕ್ತರಿಂದ ಡಾ. ಅನಿತಾ ರವಿಶಂಕರ್, ಇವರ ಕೊಠಡಿಗೆ ಹಾಕಿರುವ ಬೀಗವನ್ನು ತೆರವುಗೊಳಿಸುವ ಬಗ್ಗೆ ಲೋಕಾಯುಕ್ತ ಕಛೇರಿಗೆ ಅಂತಿಮ ನೆನಪೋಲೆ ಬರೆದು ಮುಂದಿನ ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
2. ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಆಡಳಿತ ಕಛೇರಿ, ಸ್ನಾತಕೋತ್ತರ ವಿಭಾಗಗಳು, ಅತಿಥಿಗೃಹಗಳಿಗೆ ಸಂಬಂಧಿಸಿ, ನೀರು ಸರಬರಾಜು, ಶುಚಿತ್ವ ಹಾಗೂ ಇನ್ನಿತರ ಅಗತ್ಯತೆಗಳ ನಿರ್ವಹಣೆಯನ್ನು ಅಚ್ಚುಕಟ್ಟಾಗಿ, ವ್ಯವಸ್ಥಿತವಾಗಿ ನಿರ್ವಹಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು

ನಿರ್ಣಯಿಸಿತು ಮತ್ತು ಈ ನಿರ್ವಹಣೆಯಲ್ಲಿ ಯಾವುದೇ ಲೋಪದೋಷಗಳು ಕಂಡುಬಂದಲ್ಲಿ ಕಾರ್ಯಕಾರಿ ಅಭಿಯಂತರರೇ ಜವಾಬ್ದಾರರು ಎಂದು ಸಿಂಡಿಕೇಟು ನಿರ್ಣಯಿಸಿತು.

3. ಸಮಾಜ ಕಲ್ಯಾಣ ಇಲಾಖೆಯಿಂದ ವಿಶ್ವವಿದ್ಯಾನಿಲಯದಲ್ಲಿ ಸ್ವೀಕೃತವಾಗಿರುವ ಮತ್ತು ವಿಶ್ವವಿದ್ಯಾನಿಲಯಕ್ಕೆ ಬಾಕಿಯಿರುವ ಅನುದಾನದ ವಿವರಗಳ ವರದಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ವಿಶ್ವವಿದ್ಯಾನಿಲಯಕ್ಕೆ ಬಾಕಿಯಿರುವ ಮತ್ತು ಹೆಚ್ಚಿನ ಅನುದಾನವನ್ನು ವಿಶ್ವವಿದ್ಯಾನಿಲಯಕ್ಕೆ ಒದಗಿಸಲು ಮನವಿ ಮಾಡಿ ಚರ್ಚಿಸಲು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮಾನ್ಯ ಸಚಿವರನ್ನು ಭೇಟಿ ಮಾಡಬೇಕೆಂಬುದಾಗಿಯೂ ಸಿಂಡಿಕೇಟು ನಿರ್ಣಯಿಸಿತು.
4. ಯುಜಿಸಿ ಮಾರ್ಗಸೂಚಿ 2018ರ ಪ್ರಕಾರ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ವಿಭಾಗಗಳ Senior Professor ಗಳ ಮುಂಭಡ್ತಿಗೆ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
5. ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಪದವಿ ತರಗತಿಗಳಿಗೆ ಪ್ರವೇಶಾತಿಗೆ ಅನುಮತಿ ನೀಡಲು ನಿರ್ಣಯಿಸಲಾಯಿತು. ದಕ್ಷಿಣ ಕನ್ನಡ, ಕೊಡಗು ಮತ್ತು ಉಡುಪಿ ಜಿಲ್ಲೆಯ ಎಲ್ಲಾ ಪದವಿ ಪೂರ್ವ ಕಾಲೇಜುಗಳಿಗೆ ವಿಶ್ವವಿದ್ಯಾನಿಲಯದ ಪದವಿ ತರಗತಿಗಳ ಪ್ರವೇಶಾತಿಗೆ ಸಂಬಂಧಿಸಿದ Online Application Software ನ ಲಿಂಕ್‌ನ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು. ಈ ಕುರಿತು ದಾಖಲಾತಿ ದಿನಾಂಕ ಮತ್ತು ತರಗತಿಗಳ ಪ್ರಾರಂಭದ ದಿನಾಂಕಗಳನ್ನು ಸಾರ್ವಜನಿಕ ಪ್ರಕಟಣೆಯಲ್ಲಿ ನೀಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
6. ವಿಶ್ವವಿದ್ಯಾನಿಲಯದ ಪದವಿ ತರಗತಿಗಳ ಅಂತಿಮ ಸೆಮಿಸ್ಟರ್ ವಿದ್ಯಾರ್ಥಿಗಳ ಪರೀಕ್ಷೆಗಳನ್ನು ಸಪ್ಟೆಂಬರ್ 15 ರೊಳಗೆ ಮುಗಿಸಿ ಸಪ್ಟೆಂಬರ್ 30ರೊಳಗೆ ಫಲಿತಾಂಶ ಪ್ರಕಟಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
7. ಶೈಕ್ಷಣಿಕ ವರ್ಷದ 2022–23ನೇ ಸಾಲಿಗೆ ಪ್ರಥಮ ಸೆಮಿಸ್ಟರಿನ ಪದವಿ ಕಾರ್ಯಕ್ರಮಗಳಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮತ್ತು ಆಫ್‌ಲೈನ್ ಮೂಲಕ ತರಗತಿಗಳನ್ನು ನಡೆಸಲು ಸೂಕ್ತ ಕ್ರಮಕೈಗೊಳ್ಳಬೇಕೆಂಬುದಾಗಿಯೂ ಸಭೆಯಲ್ಲಿ ನಿರ್ಣಯಿಸಲಾಯಿತು.
8. ರಾಷ್ಟ್ರೀಯ ಶಿಕ್ಷಣ ನೀತಿ 2020 ರ ಪದವಿ ಮಟ್ಟದ ಕಾರ್ಯಕ್ರಮಗಳ ಪಠ್ಯಕ್ರಮ ಮತ್ತು ಪಠ್ಯಕ್ರಮಗಳ ಪರಾಮರ್ಶನ ಪುಸ್ತಕಗಳ (Syllabus and References) ವಿವರಗಳನ್ನು ಕನ್ನಡದಲ್ಲಿ ಲಭ್ಯವಾಗುವಂತೆ ಕ್ರಮಕೈಗೊಳ್ಳಲು ಸಂಬಂಧಿತ ಅಧ್ಯಯನ ಮಂಡಳಿ ಅಧ್ಯಕ್ಷರುಗಳಿಗೆ ಸೂಚಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
9. ಘಟಕ ಕಾಲೇಜುಗಳ ಕಾಲೇಜು ಅಭಿವೃದ್ಧಿ ಮಂಡಳಿಯ ಕಾರ್ಯ ವೈಖರಿಯ ಬಗ್ಗೆ ಸೂಕ್ತ ಪರಿನಿಯಮ ರಚಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
10. ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಸಂಯೋಜಿತ ಕಾಲೇಜುಗಳಲ್ಲಿ ಸಂಯೋಜನಾ ಅರ್ಜಿ ಸಲ್ಲಿಸದಿರುವ ಬಗ್ಗೆ ಕಾರಣಗಳೊಂದಿಗಿನ ವಿವರಗಳನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ನಿರ್ಣಯಿಸಲಾಯಿತು.
11. ಶೈಕ್ಷಣಿಕ ವರ್ಷ 2022–23ನೇ ಸಾಲಿನ ಕಾಲೇಜುಗಳ ಸಂಯೋಜನೆಗೆ ಸಂಬಂಧಿಸಿ, ಸೀಮಿತ ಅವಧಿಯಲ್ಲಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸಹಕರಿಸಿದ ಎಲ್ಲರಿಗೂ ಸಿಂಡಿಕೇಟು ಅಭಿನಂದನೆಗಳನ್ನು ಸಲ್ಲಿಸಿತು.
12. ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ ಪದವಿ ಕಾರ್ಯಕ್ರಮಗಳಿಗೆ ಶೇಕಡಾ 20 ವಿದ್ಯಾರ್ಥಿ ಪರಿಮಿತಿಯನ್ನು ಬೇಡಿಕೆಗನುಗುಣವಾಗಿ ನೀಡಲು ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

13. ಪ್ರಸ್ತುತ ಗಡಿನಾಡು / ಹೊರನಾಡು ಕನ್ನಡ ವಿದ್ಯಾರ್ಥಿಗಳು ಕಂದಾಯ ಇಲಾಖೆಯಿಂದ ದೃಢೀಕರಣ ಪತ್ರ ಪಡೆಯಬೇಕಾಗಿದ್ದು, ಅದರ ಬದಲಾಗಿ ವಿದ್ಯಾರ್ಥಿಗಳ ಆಧಾರ್ ಕಾರ್ಡ್ ಮತ್ತು ಎಸ್.ಎಸ್.ಎಲ್.ಸಿ. ಅಂಕಪಟ್ಟಿಯನ್ನು ಪರಿಶೀಲಿಸಿಕೊಂಡು ಸದರಿ ವಿದ್ಯಾರ್ಥಿಗಳನ್ನು ಗಡಿನಾಡು / ಹೊರನಾಡು ಕನ್ನಡ ವಿದ್ಯಾರ್ಥಿಗಳೆಂದು ಪರಿಗಣಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
14. ಸ್ನಾತಕೋತ್ತರ ವಸ್ತುವಿಜ್ಞಾನ ಕಾರ್ಯಕ್ರಮದ ಸ್ನಾತಕೋತ್ತರ ಪದವೀಧರರನ್ನು ಪದವಿ ಪೂರ್ವ ಭೌತಶಾಸ್ತ್ರ ವಿಷಯದ ಬೋಧಕ ಹುದ್ದೆಯ ನೇಮಕಾತಿಗೆ ಅರ್ಹರೆಂದು ಪರಿಗಣಿಸಲು ಕೋರಿ ಸರಕಾರದ ನೇಮಕಾತಿ ಪ್ರಾಧಿಕಾರಕ್ಕೆ ಮನದಟ್ಟು ಮಾಡಬೇಕೆಂಬ ಮನವಿಯನ್ನು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಾದ ಶ್ರೀ. ಬಿ. ಸಿ. ನಾಗೇಶ್ ಇವರಿಗೆ ನೀಡಿರುವ ವಿಷಯವನ್ನು ಸಿಂಡಿಕೇಟಿನ ಮಾನ್ಯ ಸದಸ್ಯರಾದ ಶ್ರೀ ಕೆ. ರಮೇಶ್ ಇವರು ಸಿಂಡಿಕೇಟು ಸಭೆಯ ಗಮನಕ್ಕೆ ತಂದರು.
15. ವಿಶ್ವವಿದ್ಯಾನಿಲಯದ ಕಾವೇರಿ ಮತ್ತು ನೇತ್ರಾವತಿ ಅತಿಥಿಗೃಹಗಳಲ್ಲಿ ಆಹಾರ ಒದಗಿಸುವುದಕ್ಕೆ ಯಥಾಸ್ಥಿತಿಯನ್ನು ಕಾಪಾಡಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
16. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಒಂದೇ ಹುದ್ದೆಯಲ್ಲಿ ಯಾವುದೇ ಮುಂಭಡ್ತಿ ಇಲ್ಲದೆ ಸೇವೆ ಸಲ್ಲಿಸುತ್ತಿರುವ ಬೋಧಕೇತರ, ತಾಂತ್ರಿಕ ಮತ್ತು ಇತರೇ ಸಿಬ್ಬಂದಿಗಳಿಗೆ ಮುಂಭಡ್ತಿ ನೀಡುವ ಬಗ್ಗೆ ಪರಿನಿಯಮದ ಕರಡು ಪ್ರತಿಯನ್ನು ಪರಿಶೀಲಿಸಿ ದೋಷಗಳಿದ್ದರೆ ಸರಿಪಡಿಸಲು ಈ ಕೆಳಗಿನ ಸಮಿತಿಯನ್ನು ರಚಿಸಲಾಯಿತು.

| | |
|---|---|
| 1. ಡಾ. ಎಂ.ಎಸ್. ತಳವಾರ್,<br>ಸಿಂಡಿಕೇಟು ಸದಸ್ಯರು | ಅಧ್ಯಕ್ಷರು |
| 2. ಪ್ರೊ. ವಿಶ್ವನಾಥ್ | ಸದಸ್ಯರು |
| 3. ಕುಲಸಚಿವರು | ಸದಸ್ಯ ಕಾರ್ಯದರ್ಶಿ |

ವರದಿಯನ್ನು ಒಂದು ತಿಂಗಳ ಕಾಲಾವಧಿಯೊಳಗೆ ಸಲ್ಲಿಸಬೇಕೆಂಬುದಾಗಿಯೂ ನಿರ್ಣಯಿಸಲಾಯಿತು.

17. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸೇವೆ ಸಲ್ಲಿಸುತ್ತಿರುವ ಶ್ರೀ ವಿಜಯ್ ಐ. ಮತ್ತು ಶ್ರೀ ರವಿಕುಮಾರ್ ಇವರುಗಳಿಗೆ ಅರ್ಹತಾ ದಿನಾಂಕ 31.03.2005 ರಿಂದ ಪೂರ್ವಾನ್ವಯವಾಗುವಂತೆ ವೇತನ ನಿಗದಿಪಡಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
18. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಾದ ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು, ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು, ಬನ್ನಡ್ಕ ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು, ಮಂಗಳಗಂಗೋತ್ರಿ ಮತ್ತು ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು, ನೆಲ್ಯಾಡಿ ಇಲ್ಲಿಗೆ ಸಂಯೋಜನಾಧಿಕಾರಿಯನ್ನು ತಾತ್ಕಾಲಿಕ ನೆಲೆಯಲ್ಲಿ ಮಾಹೆಯಾನ ರೂ.25,000.00 (ರೂಪಾಯಿ ಇಪ್ಪತ್ತೈದು ಸಾವಿರ ಮಾತ್ರ) ಸಂಭಾವನೆಯೊಂದಿಗೆ ನೇಮಿಸಲು ಸೂಕ್ತ ಕ್ರಮ ಕೈಗೊಳ್ಳಲು ಮಾನ್ಯ ಕುಲಪತಿಗಳಿಗೆ ಅಧಿಕಾರ ನೀಡಲಾಯಿತು.

ಮಾನ್ಯ ಕುಲಸಚಿವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಕುಲಸಚಿವರು ಕುಲಪತಿಗಳು.